ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ :ಸಿ7(2)ಪ್ರಾಶಿಅ:ಶುಲ್ಕ :30/2020-21 ದಿನಾಂಕ:08-10-2020

**: : ಸುತ್ತೋಲೆ : :**

ವಿಷಯ: ಖಾಸಗಿ ಅನುದಾನರಹಿತ ಶಾಲೆಗಳಲ್ಲಿ 2020-21ನೇ ಸಾಲಿನಲ್ಲಿ ದಾಖಲಾತಿ ದಿನಾಂಕವನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ: ಈ ಕಛೇರಿ ಸಮಪತ್ರದ ಸುತ್ತೋಲೆ ದಿನಾಂಕ:05.09.2020.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ ಎಲ್ಲಾ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಅಥವಾ ಮಾನ್ಯತೆ ಪಡೆದ ಅನುದಾನರಹಿತ ಶಾಲೆಯಲ್ಲಿ ದಾಖಲಾಗಿರುವುದನ್ನು ಖಚಿತಪಡಿಸಬೇಕಾಗಿರುವುದರಿಂದ 2020-21ನೇ ಸಾಲಿನಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ದಿನಾಂಕ:30.09.2020ರೊಳಗೆ ಪೂರ್ಣಗೊಳಿಸಲು ಎಲ್ಲಾ ಶಾಲೆಗಳಿಗೆ ಹಾಗೂ ಪೋಷಕರಿಗೆ ಉಲ್ಲೇಖದ ಸುತ್ತೋಲೆಯಂತೆ ತಿಳಿಸಲಾಗಿತ್ತು.

ಸದರಿ ದಾಖಲಾತಿಗೆ ನಿಗಧಿಪಡಿಸಿದ್ದ ಕಾಲಾವಕಾಶವನ್ನು ವಿಸ್ತರಿಸುವಂತೆ ಸಲ್ಲಿಕೆಯಾಗಿರುವ ಕೋರಿಕೆ/ ಮನವಿ ಮೇರೆಗೆ ಅಂತಿಮವಾಗಿ **ದಿನಾಂಕ:16-10-2020 ರವರೆಗೆ ದಾಖಲಾತಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ.** ಉಳಿದಂತೆ ಉಲ್ಲೇಖದ ಸುತ್ತೋಲೆಯಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

[ಆಯುಕ್ತರ ಆದೇಶದ ಮೇರೆಗೆ]

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಗೆ:

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ವಿಭಾಗ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಇವರು ಎಲ್ಲಾ ಖಾಸಗಿ ಅನುದಾನರಹಿತ ಆಡಳಿತ ಮಂಡಳಿ ಹಾಗೂ ಅನುದಾನರಹಿತ ಶಾಲಾ ಮುಖ್ಯಸ್ಥರುಗಳಿಗೆ ಸುತ್ತೋಲೆಯನ್ನು ತಲುಪಿಸುವುದು)

**ಪ್ರತಿಯನ್ನು ಮಾಹಿತಿಗಾಗಿ**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
4. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
5. ಕಛೇರಿ ಪ್ರತಿ.